ಈ ಈ ಯೋಜನೆಯು ಪ್ರಾರಂಭವಾದಂದಿನಿಂದ 1990-91ರವರೆಗೆ 1272 ಫಲಾನುಭವಿಗಳು ಸ್ವ ಉದ್ಯೋಗಿಗಳಾಗಿದ್ದಾರೆ.

ವಿಷಯ :- ಸಾರ್ವಜನಿಕ ಉದ್ದಿಮೆಗಳು.

ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ : 468 (1081)

ಶ್ರಿ ಹೆಚ್.ವೈ.ಮೇಟಿ. (ಗಳೇದಗುಡ್ಡ):- ಮಾನ್ಯ ಭಾರಿ ಮತ್ತು ಮಧ್ಯಮ ಕೈಗಾರಿಕಾ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವಿರೆ.?

ಅ ರಾಜ್ಯದಲ್ಲಿ ಇದುವರೆವಿಗೂ ಸಾರ್ವಜನಿಕ ಉದ್ಯಮಗಳಲ್ಲಿ ನಷ್ಟ ಅನುಭವಿಸುತ್ತಿರುವ ಕೈಗಾರಿಕೆಗಳ ಸಂಖ್ಯೆ ಎಷ್ಟು ಹಾಗೂ ಅವು ಯಾವುವು?

ಆ ಸರ್ಕಾರವು ಈ ನಷ್ಟದಲ್ಲಿರುವ ಕೈಗಾರಿಕೆಗಳನ್ನು ಖಾಸಗಿಯವರಿಗೆ ವಹಿಸಿದೆಯೇ ?

ಇ ವಹಿಸಿದ್ದಲ್ಲಿ ಯಾವ ಯಾವ ಕೈಗಾರಿಕೆಗಳನ್ನು ಹಸ್ತಾಂತರ ಮಾಡಲಾಗಿದೆ.?(ವಿವರ ನೀಡುವುದು)

ಶ್ರಿಮತಿ ಮನೋರಮ ಮಧ್ವರಾಜ್(ಭಾರಿ ಮತ್ತು ಮಧ್ಯಮ ಕೈಗಾರಿಕಾ ಸಚಿವರು)

ಅ ನಷ್ಟ ಅನುಭವಿಸುತ್ತಿರುವ ಕೈಗಾರಿಕೆಗಳ ಸಂಖ್ಯೆ : 7 (1989-90 ರವರೆಗೆ)ಪಟ್ಟಿಯನ್ನು ಲಗತ್ತಿಸಿದೆ.

ಆ ಇಲ್ಲ.

ಇ ಪ್ರಶ್ನೆ (ಅ)ಗೆ ಕೊಟ್ಟಿರುವ ಉತ್ತರದಿಂದ ಈ ಪ್ರಶ್ನೆ ಉದ್ಭವಿಸುವುದಿಲ್ಲ.

STATEMENT SHOWING THE NAME OF LOSS MAKING INDUSTRIES COMING UNDER THE ADMINISTRATIVE CONTROL OF COMMERCE & INDUSTRIES DEPARTMENT

---

1. Karnataka Soaps and Detergents Limited.
2. Karnataka Silk Industries Corporation Limited.
3. Karnataka Implements and Machineries Company Ltd.
4. Mysore Electrical Industries Limited.
5. Mysore Chrome Tanning Company Limited.
6. Chamundi Machine Tools Limited.
7. Mysore Cosmetics Limited.

ವಿಷಯ :- ಬೈಲಹೊಂಗಲ ತಾಲ್ಲೂಕು ವಣ್ಣೂರು ಗ್ರಾಮದಲ್ಲಿ ಪ್ರಾಥಮಿಕ ಆರೋಗ್ಯ ಕೇಂದ್ರ.

ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ : 470 (2336)

ಶ್ರಿ ಶಿವಾನಂದ ಹೆಚ್.ಕೌಜಲಗಿ (ಬೈಲಹೊಂಗಲ):- ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವಿರೆ ?

ಅ ಬೆಳಗಾವಿ ಜಿಲ್ಲೆ ಬೈಲಹೊಂಗಲ ತಾಲ್ಲೂಕು ವಣ್ಣೂರು ಗ್ರಾಮದಲ್ಲಿ ಪ್ರಾಥಮಿಕ ಆರೋಗ್ಯ ಕೇಂದ್ರವನ್ನು ಪ್ರಾರಂಭಿಸಬೇಕೆಂದು ಮನವಿಗಳು ಬಂದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಆ ಹಾಗಿದ್ದಲ್ಲಿ ಸರ್ಕಾರದವರು ಅಲ್ಲಿ ಪ್ರಾಥಮಿಕ ಆರೋಗ್ಯ ಕೇಂದ್ರವನ್ನು ಪ್ರಾರಂಭಿಸಲು ಯಾವ